ಅ) *ಕಳೆದ ವರ್ಷ ಸರ್ಕಾರ ಪತ್ರಿಕಾ ಪ್ರಕಟಣೆ ನೀಡಿದ ನಂತರವೂ ಅನೇಕ ಅನಧಿಕೃತ ಎಲೆಕ್ಟ್ರೋ ಹೋಮಿಯೋಪಥಿಕ್ ಕಾಲೇಜುಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು?*

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಹೌದು.

ಕರ್ನಾಟಕ ರಾಜ್ಯದಲ್ಲಿ ಮಾನ್ಯತೆ ಪಡೆಯದೆ47ಅನಧಿಕೃತ ಎಲೆಕ್ಟ್ರೋ ಹೋಮಿಯೋಪಥಿಕ್ ಕಾಲೇಜುಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇವುಗಳನ್ನು ಮುಚ್ಚಿಸಲು ಈಗಾಗಲೇ ಕ್ರಮಕೈಗೊಳ್ಳಲಾಗಿದ್ದು, ನೋಂದಣಾಧಿಕಾರಿಗಳು, ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿ, ಬೆಂಗಳೂರು ಇವರು ಕರ್ನಾಟಕ ರಾಜ್ಯದಲ್ಲಿ ನಡೆಯುತ್ತಿರುವ ಅನೇಕ ಎಲೆಕ್ಟ್ರೋ ಹೋಮಿಯೋಪಥಿಕ್ ಆಲ್ಟರನೇಟಿವ್ ಸಿಸ್ಟಂಸ್ ಆಫ್ ಮೆಡಿಸಿನ್, ಇಂತಹ ಕಾಲೇಜುಗಳಿಗೆ ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ ಸಂಬಂಧಿಸಿದ ಸಂಸ್ಥೆ ಕಾಲೇಜುಗಳ ವಿರುದ್ಧ ಸ್ಥಳೀಯ ಆರಕ್ಷಕ ಠಾಣೆಗಳು ಮತ್ತು ಜ್ಯುಡಿಶಿಯಲ್ ಮ್ಯಾಜಿಸ್ಟ್ರೇಟ್‌ರವರಲ್ಲಿ ದೂರನ್ನು ದಾಖಲಿಸಿ ಆಯಾ ಕಾಲೇಜು ಆಡಳಿತ ವರ್ಗದವರ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಿ 35 ಕಾಲೇಜುಗಳನ್ನು ಮುಚ್ಚಿಸಲು ಕ್ರಮಕೈಗೊಳ್ಳಲಾಗಿದೆ. ಆದಾಗ್ಯೂ ಇನ್ನು ಕೆಲವು ಸಂಸ್ಥೆಗಳು ನ್ಯಾಯಾಲಯದ ತಡೆಯಾಜ್ಞೆ ತಂದಿದ್ದರಿಂದ ತಡೆಯಾಜ್ಞೆಯನ್ನು ತೆರವು ಮಾಡಿಸಲು ಕ್ರಮ ಕೈಗೊಳ್ಳಲಾಗಿದೆ.

ಆರೋಗ್ಯ ಖಾತೆಯಿಂದ ವಿವಿಧ ಜಿಲ್ಲೆಗಳಿಗೆ ಔಷಧಿ ಖರೀದಿಗೆ ಮಂಜೂರಾದ ಹಣ.

362 - ಡಾ|| ಯು. ಚಿತ್ತರಂಜನ್ (ಭಟ್ಕಳ) : ಮಾನ್ಯ ವಾರ್ತಾ ಮತ್ತು ಪ್ರಸಾರ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ವಿವಿಧ ಜಿಲ್ಲೆಗಳಿಗೆ ಸರಕಾರಿ ಆಸ್ಪತ್ರೆಗಳಿಗೆ ಔಷಧಿ ಖರೀದಿಗೆ ಮುಂಗಡ ಪತ್ರದಲ್ಲಿ ಮಂಜೂರಾದ ಹಣ ಎಷ್ಟು?1995-96ನೇಸಾಲಿನಲ್ಲಿ ಫೆಬ್ರುವರಿ1996 ರವರೆಗೆ ಬಿಡುಗಡೆಯಾದ ಹಣವೆಷ್ಟು?*

ಆ) *ಖರೀದಿಸಿದ ಔಷಧ ಗುಣಮಟ್ಟ ಪರೀಕ್ಷಿಸಲು ಸರ್ಕಾರದಲ್ಲಿ ಏನಾದರೂ ವ್ಯವಸ್ಥೆ ಇದೆಯೇ?*

ಶ್ರೀ ಎಂ.ಸಿ. ನಾಣಯ್ಯ (ವಾರ್ತಾ ಮತ್ತು ಪ್ರಚಾರ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 1995-96ನೇ ಸಾಲಿನ ಆಯವ್ಯಯದಲ್ಲಿ ಔಷಧಿಗಳ ಖರೀದಿಗಾಗಿ ರೂ. 20.44 ಕೋಟಿ ರೂ.ಗಳನ್ನು ಯೋಜನೇತರ

ಅಡಿಯಲ್ಲಿ ನಿಗದಿಪಡಿಸಲಾಗಿದೆ. 20.05 ಕೋಟಿ ಬಿಡುಗಡೆ ಮಾಡಲಾಗಿದೆ.

ಆ) ಇದೆ. ಸರ್ಕಾರದ ಔಷಧ ನಿಯಂತ್ರಣ ಇಲಾಖೆಯಲ್ಲಿ 1940ರ ಔಷಧಗಳ ಮತ್ತು ಪ್ರಸಾಧನ ಸಾಮಗ್ರಿಗಳ ಅಧಿನಿಯಮದ ಮೇರೆಗೆ, ಔಷಧಿಗಳ ಗುಣಮಟ್ಟ ಪರೀಕ್ಷಿಸಲು ಪ್ರಯೋಗಾಲಯದಲ್ಲಿ ವ್ಯವಸ್ಥೆ ಇದೆ.

ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ನೇಮಕಾತಿ.

363 - ಡಾ. ಯು. ಚಿತ್ತರಂಜನ್ (ಭಟ್ಕಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1995-96ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಜನ ಹೊಸ ಶಿಕ್ಷಕರನ್ನು ನೇಮಿಸಲಾಗಿದೆ. (10,000 ಗುರಿ ಏಕೆ ಮುಟ್ಟಲಿಲ್ಲ)?

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಜೂರಾದ ಶಿಕ್ಷಕರ ಹುದ್ದೆ ಎಷ್ಟು? ಅವಶ್ಯಕ ಹುದ್ದೆಗಳೆಷ್ಟು 1995-96ನೇ ಸಾಲಿನಲ್ಲಿ ಎಷ್ಟು ಶಿಕ್ಷಕರನ್ನು ನೇಮಿಸಲಾಗಿದೆ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ದಿನಾಂಕ 31-8-95 ರ ಅಂತ್ಯಕ್ಕೆ ಖಾಲಿ ಇದ್ದ 18,700 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು 2 ಹಂತದಲ್ಲಿ ತುಂಬಲು ಸರ್ಕಾರದ ತೀರ್ಮಾನವಾಗಿದೆ. ಮೊದಲನೇ ಹಂತದಲ್ಲಿ ಒಟ್ಟು 9,769 ಹುದ್ದೆಗಳನ್ನು (1994ರ ಸಾಮಾನ್ಯ ನೇಮಕಾತಿಯ ಹೆಚ್ಚುವರಿ ಪಟ್ಟಿಯಿಂದ 1031 ಹುದ್ದೆಗಳು ಮತ್ತು ವಿಶೇಷ ನೇಮಕಾತಿಯಿಂದ 8738 ಹುದ್ದೆಗಳು) 1995-96ನೇ ಸಾಲಿನಲ್ಲಿ ತುಂಬಲಾಗಿದೆ. ಉಳಿದ ಹುದ್ದೆಗಳನ್ನು 2ನೇ ಹಂತದಲ್ಲಿ ಸಾಮಾನ್ಯ ನೇಮಕಾತಿಯ ಮೂಲಕ ಶೀಘ್ರದಲ್ಲಿ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಜೂರಾದ ಹುದ್ದೆಗಳು 6262.

ಶಿಕ್ಷಕರ ವಿದ್ಯಾರ್ಥಿ ಅನುಪಾತ 1:50 ರಂತೆ 140 ಹುದ್ದೆಗಳ ಅವಶ್ಯಕತೆ ಇದೆ.

1995-96ನೇ ಸಾಲಿನಲ್ಲಿ 322 ಹುದ್ದೆಗಳಿಗೆ ನೇಮಕಾತಿಯಾಗಿದೆ.

ಧಾರವಾಡ ಸರ್ಕಾರಿ ಮಹಿಳಾ ತರಬೇತಿ ಸಂಸ್ಥೆಯ ಶತಮಾನೋತ್ಸವ

364 - ಶ್ರೀ ಚಂದ್ರಕಾಂತ ಜಿ. ಬೆಲ್ಲದ (ಧಾರವಾಡ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡದ ಸರ್ಕಾರಿ ಮಹಿಳಾ ತರಬೇತಿ ಸಂಸ್ಥೆಯ ಶತಮಾನೋತ್ಸವ ಆಚರಿಸಬೇಕಾಗಿರುವುದು ಸರ್ಕಾರದ ಗಮನದಲ್ಲಿ ಇದೆಯೇ?